ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 28/1/2021

# ಹೊರಟ್ಟಿ ಇನ್ನು ಸಭಾಪತಿ?

ಉವಾ 28/1/21

## ಬಿಜೆಪಿಯ ಪ್ರಾಣೇಶ್ ಉಪಸಭಾಪತಿ ಸಾಧ್ಯತೆ



**75 ಒಟ್ಟು ಸ್ಥಾನ**

- ಬಿಜೆಪಿ-31
- ಕಾಂಗ್ರೆಸ್-28
- ಜೆಡಿಎಸ್-13
- ಪಕ್ಷೇತರ-01
- ಸಭಾಪತಿ-01
- ಖಾಲಿ-01

**ಬೆಂಗಳೂರು:** ನಿರೀಕ್ಷೆಯಂತೆ ಮುಂದೆ ತೆರವಾಗಬಹುದಾದ ವಿಧಾನಪರಿಷತ್ ಸಭಾಪತಿ ಸ್ಥಾನ ಜೆಡಿಎಸ್‌ಗೆ ಬಿಟ್ಟು ಕೊಡಲು ಬಿಜೆಪಿ ನಿರ್ಧರಿಸಿದೆ. ಉಪ ಸಭಾಪತಿ ಸ್ಥಾನದ ಚುನಾವಣೆಗೆ ಬಿಜೆಪಿಯ ಎಂ.ಕೆ. ಪ್ರಾಣೇಶ್ ನಾಮಪತ್ರ ಸಲ್ಲಿಸಲಿದ್ದಾರೆ. ಈ ಮೂಲಕ ಮೇಲ್ಮನೆಯಲ್ಲಿ ಬಿಜೆಪಿ-ಜೆಡಿಎಸ್ ದೋಸ್ತಿ ಮಾಡಿಕೊಳ್ಳಲು ನಿರ್ಧರಿಸಿವೆ.

ಬುಧವಾರ ಮುಖ್ಯಮಂತ್ರಿ ಯಡಿಯೂರಪ್ಪ ನೇತೃತ್ವದಲ್ಲಿ ವಿಧಾನ ಪರಿಷತ್ ಸದಸ್ಯರೊಂದಿಗೆ ನಡೆದ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಪಕ್ಷ ರಾಜಕೀಯವಾಗಿ ತೀರ್ಮಾನ ತೆಗೆದುಕೊಂಡಿರುವುದರಿಂದ ಅದಕ್ಕೆ ಎಲ್ಲರೂ ಬದ್ಧರಾಗಿರಬೇಕು ಎಂದು ವಿಧಾನ ಪರಿಷತ್ ಸದಸ್ಯರಿಗೆ ಸೂಚನೆ ನೀಡಿದ್ದಾರೆ ಎಂದು ತಿಳಿದು ಬಂದಿದೆ.

ಮುಖ್ಯಮಂತ್ರಿ ಯಡಿಯೂರಪ್ಪ ಅವರ ಸೂಚನೆಯ ಮೇರೆಗೆ ಚಿಕ್ಕಮಗಳೂರಿನ ಎಂ.ಕೆ.ಪ್ರಾಣೇಶ್ ಉಪ ಸಭಾಪತಿ ಸ್ಥಾನಕ್ಕೆ ಗುರುವಾರ 10 ಗಂಟೆಗೆ ನಾಮಪತ್ರ ಸಲ್ಲಿಕೆ ಮಾಡಲಿದ್ದಾರೆ. ಸಭಾಪತಿ ಕೆ. ಪ್ರತಾಪಚಂದ್ರ ಶೆಟ್ಟಿ ಅವರನ್ನು ಪದಚ್ಯುತಗೊಳಿಸಲು ಬಿಜೆಪಿಗೆ ಜೆಡಿಎಸ್ ಬೆಂಬಲ ಸೂಚಿಸಿ ಅವಿಶ್ವಾಸ ನಿರ್ಣಯಕ್ಕೆ ನೋಟಿಸ್ ನೀಡಿದೆ. ಜತೆಗೆ ಮೇಲ್ಮನೆಯಲ್ಲಿ ವಿಧೇಯಕಗಳ ಅಂಗೀಕಾರ ಪಡೆಯುವ ಸಂದರ್ಭದಲ್ಲಿ ಆಗುತ್ತಿರುವ ಹಿನ್ನಡೆಯನ್ನು ತಪ್ಪಿಸಿಕೊಳ್ಳಲು ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡಲು ಬಿಜೆಪಿ ನಿರ್ಧರಿಸಿದೆ ಎಂದು ತಿಳಿದು ಬಂದಿದೆ.

> **ನನ್ನ ಕೆಲಸವನ್ನು ಗುರುತಿಸಿ ರಾಜ್ಯಾಧ್ಯಕ್ಷರು, ಮುಖ್ಯಮಂತ್ರಿ ಯಡಿಯೂರಪ್ಪ ಅವಕಾಶ ನೀಡಿದ್ದಾರೆ. ಸ್ಥಾನದ ಘನತೆಗೆ ಚ್ಯುತಿ ಆಗದಂತೆ ನಡೆವ ಜವಾಬ್ದಾರಿ ನನಗಿದೆ.**
>
> **• ಎಂ.ಕೆ. ಪ್ರಾಣೇಶ್,**
> **ಬಿಜೆಪಿ ಉಪಸಭಾಪತಿ ಅಭ್ಯರ್ಥಿ**

**ಹೈಕಮಾಂಡ್ ಸೂಚನೆ:** ಪ್ರತಾಪ್ ಚಂದ್ರ ಶೆಟ್ಟಿ ಅವರನ್ನು ಪದಚ್ಯುತಗೊಳಿಸಲು ಜೆಡಿಎಸ್ ಬೆಂಬಲ ಸೂಚಿಸಿದ್ದ ಬೆನ್ನಲ್ಲೇ ಮಾಜಿ ಪ್ರಧಾನಿ ದೇವೇಗೌಡ ಪ್ರಧಾನಿ ಮೋದಿ ಹಾಗೂ ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ ಜತೆ ಮಾತನಾಡಿ ಹೊರಟ್ಟಿ ಅವರನ್ನು ಸಭಾಪತಿ ಮಾಡಲು ಬೆಂಬಲಿಸುವಂತೆ ಮನವಿ ಮಾಡಿದ್ದರೆಂದು ಹೇಳಲಾಗಿತ್ತು.

▶ 7ನೇ ಪುಟಕ್ಕೆ

11

# ಭವಿಷ್ಯದಲ್ಲಿ ಮೈತ್ರಿಗೆ ಮುನ್ನುಡಿಯಾ?

ಬೆಂಗಳೂರು: ಪರಿಷತ್ ಸಭಾಪತಿ-ಉಪ ಸಭಾಪತಿ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ನಡೆ ಭವಿಷ್ಯದ ರಾಜಕೀಯ ಹೊಂದಾಣಿಕೆಗೆ ಮುನ್ನುಡಿಯಾ? ಎಂಬ ವ್ಯಾಖ್ಯಾನಗಳು ಕೇಳಿಬರುತ್ತಿವೆ.

ರಾಜ್ಯದಲ್ಲಿ ಕಾಂಗ್ರೆಸ್ ಮಣಿಸಲು ಬಿಜೆಪಿಯು ಪ್ರಾದೇಶಿಕ ಪಕ್ಷ ಜೆಡಿಎಸ್ ಜೊತೆ ಮುಂದಿನ ದಿನಗಳಲ್ಲಿ ಅಗತ್ಯ ಸಂದರ್ಭದಲ್ಲಿ ಮೈತ್ರಿ ಮಾಡಿಕೊಳ್ಳುವ ದೃಷ್ಟಿಯಿಂದ ಸಭಾಪತಿ ಬಿಟ್ಟುಕೊಟ್ಟಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಮುಂಬರುವ ಬಿಬಿಎಂಪಿ ಚುನಾವಣೆ, ತಾಲೂಕು, ಜಿಲ್ಲಾ ಪಂಚಾಯಿತಿ ಹಾಗೂ ವಿಧಾನಸಭೆ ಚುನಾವಣೆಯಲ್ಲಿ ಸ್ಪಷ್ಟ ಬಹುಮತ ಬಾರದಿದ್ದರೆ ಜೆಡಿಎಸ್ ಜೊತೆ ಕೈ ಜೋಡಿಸಿ ಅಧಿಕಾರ ಪಡೆಯುವ ಲೆಕ್ಕಾಚಾರ ಇದೆ. ಈ ಹಿಂದೆ ಕೇಳಿ ಬಂದಂತೆ ರಾಷ್ಟ್ರ ಮಟ್ಟದಲ್ಲಿ ಜೆಡಿಎಸ್ ಎನ್‌ಡಿಎ ತೆಕ್ಕೆಗೆ ಹೋಗುವ ಸಾಧ್ಯತೆಯೂ ಇಲ್ಲದಿಲ್ಲ ಎಂದು ಹೇಳಲಾಗಿದೆ.

## ಹೊರಟ್ಟಿ ಇನ್ನು ಸಭಾಪತಿ?

10 ವಿ 28/1/21

**1ನೇ ಪುಟದಿಂದ** ▶ ದೇವೇಗೌಡರ ಮನವಿ ಹಿನ್ನೆಲೆಯಲ್ಲಿ ಕೇಂದ್ರದ ಬಿಜೆಪಿ ನಾಯಕರು ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡಲು ರಾಜ್ಯ ಬಿಜೆಪಿ ನಾಯಕರಿಗೆ ಸೂಚನೆ ನೀಡಿದ್ದರು ಎಂದು ತಿಳಿದು ಬಂದಿದೆ. ಪಕ್ಷದ ಹೈಕಮಾಂಡ್ ಸೂಚನೆ ಮೇರೆಗೆ ಮುಖ್ಯಮಂತ್ರಿ ಯಡಿಯೂರಪ್ಪ ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡಲು ತೀರ್ಮಾನಿಸಲಾಗಿದ್ದು ಉಪ ಸಭಾಪತಿ ಸ್ಥಾನಕ್ಕೆ ಎಂ.ಕೆ. ಪ್ರಾಣೇಶ್ ಗೆ ನಾಮಪತ್ರ ಸಲ್ಲಿಸುವಂತೆ ಸೂಚನೆ ನೀಡಿದ್ದಾರೆ ಎಂದು ತಿಳಿದು ಬಂದಿದೆ.

**ಹೊರಟ್ಟಿ ಮನವಿ:** ಸಭಾಪತಿ ಸ್ಥಾನದ ಆಕಾಂಕ್ಷಿಯಾಗಿರುವ ಜೆಡಿಎಸ್‌ನ ಹಿರಿಯ ಸದಸ್ಯ ಬಸವರಾಜ್ ಹೊರಟ್ಟಿ ಪಕ್ಷದ ವರಿಷ್ಠ ಎಚ್.ಡಿ.ದೇವೇಗೌಡರ ಸೂಚನೆ ಮೇರೆಗೆ ಬುಧವಾರ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಸಭಾಪತಿ ಸ್ಥಾನಕ್ಕೆ ಪಕ್ಷಕ್ಕೇ ಬೆಂಬಲಿಸುವಂತೆ ಮನವಿ ಮಾಡಿದ್ದರು. ಶುಕ್ರವಾರ ನಡೆಯುವ ಉಪ ಸಭಾಪತಿ ಸ್ಥಾನಕ್ಕೆ ಜೆಡಿಎಸ್ ಅಭ್ಯರ್ಥಿಯನ್ನು ಕಣಕ್ಕಿಳಿಸದೆ ಬಿಜೆಪಿಗೆ ಬೆಂಬಲ ಸೂಚಿಸುವುದಾಗಿ ತಿಳಿಸಿದ್ದರು.

ಸಿಎಂ ಯಡಿಯೂರಪ್ಪ ಭೇಟಿಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಹೊರಟ್ಟಿ ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟು ಕೊಡುವಂತೆ ಮನವಿ ಮಾಡಿದ್ದೇವೆ. ಸಿಎಂ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಉಪ ಸಭಾಪತಿ ಸ್ಥಾನ ಬಿಜೆಪಿಗೆ ಬಿಟ್ಟು ಕೊಡಲಿದ್ದೇವೆ. ಜ. 29 ರಂದು ಉಪ ಸಭಾಪತಿ ಚುನಾವಣೆ ನಡೆಯಲಿದೆ. ಉಪ ಸಭಾಪತಿ ಚುನಾವಣೆ ನಂತರ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅವರು ಉಪ ಸಭಾಪತಿ ಅವರಿಗೆ ರಾಜೀನಾಮೆ ನೀಡಬಹುದು ಎಂದು ಹೇಳಿದರು.